**All India Radio: Bangalore**
**National Bulletin In Kannada**
**03.07.2025  19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**03.07.2025  19.35 p.m.**
**<><><><>**

ಮುಖ್ಯಾಂಶಗಳು :

೧. ಐದು ರಾಷ್ಟ್ರಗಳ ಪ್ರವಾಸದ ಎರಡನೇ ಚರಣದಲ್ಲಿ ಟ್ರಿನಿಡಾಡ್ ಮತ್ತು ಟೊಬಾಗೋಗೆ ಪ್ರಧಾನಿ ನರೇಂದ್ರ ಮೋದಿ ಪ್ರಯಾಣ

೨. ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷರ ಮೊದಲ ರಾಷ್ಟ್ರೀಯ ಮಟ್ಟದ ಸಮ್ಮೇಳವನ್ನು ಉದ್ಘಾಟಿಸಿದ ಲೋಕಾಸಭಾಧ್ಯಕ್ಷ ಓಂ ಬಿರ್ಲಾ

೩. ಕೋವಿಡ್ ಲಸಿಕೆಗಳು-ಹಠಾತ್ ಹೃದಯಾಘಾತದ ಸಾವುಗಳ ನಡುವೆ ಯಾವುದೇ ಸಂಬಂಧ ಕಂಡುಬಂದಿಲ್ಲ- ದೆಹಲಿ ಏಮ್ಸ್

೪. ಭಯೋತ್ಪಾದನೆ ಕುರಿತು ಏಕಿಕೃತ ಜಾಗತಿಕ ಪ್ರತಿಕ್ರಿಯೆಯ ಅಗತ್ಯ-ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಪ್ರತಿಪಾದನೆ

**<><><><>**

ಪ್ರಧಾನಿ ನರೇಂದ್ರ ಮೋದಿ ಅವರು ಘಾನಾಗೆ ತಮ್ಮ ಯಶಸ್ವಿ ಭೇಟಿಯನ್ನು ಪೂರ್ಣಗೊಳಿಸಿದ ನಂತರ ತಮ್ಮ ಐದು ರಾಷ್ಟ್ರಗಳ ಪ್ರವಾಸದ ಎರಡನೇ ಚರಣದಲ್ಲಿ ಇಂದು ಟ್ರಿನಿಡಾಡ್ ಮತ್ತು ಟೊಬಾಗೋಗೆ ತೆರಳಿದರು.

ಇದಕ್ಕೂ ಮುನ್ನ ಘಾನಾ ರಾಜಧಾನಿ ಅಕ್ರಾದಲ್ಲಿ ಇಂದು ಘಾನಾ ಸಂಸತ್ತನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ ಮತ್ತು ಘಾನಾ ನಡುವಿನ ಸಂಬಂಧವು ಯಾವುದೇ ಮಿತಿಯನ್ನು ಹೊಂದಿಲ್ಲ ಎಂದು ಹೇಳಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮುಕ್ತತೆ ಮತ್ತು ಸಂವಾದದ ಮಹತ್ವವನ್ನು ಒತ್ತಿ ಹೇಳಿದ ಅವರು, ಭಾರತದ ಅಗಾಧ ವೈವಿಧ್ಯತೆಯನ್ನು ಅದರ ಪ್ರಜಾಪ್ರಭುತ್ವದ ರಚನೆಯ ಬಲವಾಗಿದೆ ಎಂದರು.

ಧ್ವನಿ: ಪ್ರಧಾನಿ ಮೋದಿ

ತಮ್ಮ ಭೇಟಿಯ ಸಮಯದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಘಾನಾ ಅಧ್ಯಕ್ಷ ಜಾನ್ ಮಹಾಮ, ದೇಶದ ಅತ್ಯುನ್ನತ ನಾಗರಿಕ ಗೌರವವಾದ "ದಿ ಆಫೀಸರ್ ಆಫ್ ದಿ ಆರ್ಡರ್ ಆಫ್ ದಿ ಸ್ಟಾರ್ ಆಫ್ ಘಾನಾ" ವನ್ನು ಪ್ರದಾನ ಮಾಡಿದರು. ಟ್ರಿನಿಡಾಡ್ ಮತ್ತು ಟೋಬ್ಯಾಗೋ ಗೆ ಭೇಟಿ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು, ಅಲ್ಲಿನ ಅಧ್ಯಕ್ಷ ಕ್ರಿಸ್ಟೀನ್ ಕಾರ್ಲಾ ಕಾಂಗಲೂ ಮತ್ತು ಪ್ರಧಾನಮಂತ್ರಿ ಕಮ್ಲಾ ಪೆರ್ಸಾದ್ - ಬಿಸೆಸ್ಸಾರ್ ಅವರನ್ನು ಭೇಟಿ ಮಾಡಲಿದ್ದಾರೆ ಮತ್ತು ದ್ವಿಪಕ್ಷೀಯ ಸಂಬಂಧಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ.

ಟ್ರಿನಿಡಾಡ್ ಮತ್ತು ಟೋಬ್ಯಾಗೋ ಗೆ ಭಾರತೀಯ ವಲಸಿಗರು ಭೇಟಿ ನೀಡಿ ೧೮೦ ವರ್ಷಗಳು ಪೂರೈಸಿರುವ ಹಿನ್ನೆಲೆಯಲ್ಲಿ ಪ್ರಧಾನಿ ಅವರ ಈ ಭೇಟಿ ಅತ್ಯಂತ ಮಹತ್ವದ್ದೆಂದು ಪರಿಗಣಿಸಲಾಗಿದೆ. ಉಭಯ ದೇಶಗಳ ನಾಯಕರು ಡಿಜಿಟಲ್ ಪರಿವರ್ತನೆ, ಆಹಾರ ಸಂಸ್ಕರಣೆ, ವ್ಯಾಪರ , ಆರೋಗ್ಯ, ಸಾಗರ ಭದ್ರತೆ, ಸಾರಿಗೆ ಮತ್ತು ಒಟ್ಟಾರೆ ಆರ್ಥಿಕ ಮತ್ತು ಸಾಂಸ್ಕೃತಿಕ ಸಹಕಾರದ ಬಗ್ಗೆ ಚರ್ಚೆ ನಡೆಸುವ ಸಾಧ್ಯತೆ ಇದೆ. ಅಲ್ಲದೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಟ್ರಿನಿಡಾಡ್ ಮತ್ತು ಟೋಬ್ಯಾಗೋ ಸಂಸತ್ತನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ ಮತ್ತು ಅನಿವಾಸಿ ಭಾರತೀಯರೊಂದಿಗೆ ಸಂವಾದ ನಡೆಸಲಿದ್ದಾರೆ.

<><><><>

ಹರಿಯಾಣದ ಮಾನೇಸರ್‌ನಲ್ಲಿ ಅಂತಾರಾಷ್ಟ್ರೀಯ ಆಟೋಮೋಟಿವ್ ತಂತ್ರಜ್ಞಾನ ಕೇಂದ್ರದಲ್ಲಿಂದು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷರ ಮೊದಲ ರಾಷ್ಟ್ರೀಯ ಮಟ್ಟದ ಸಮ್ಮೇಳವನ್ನು ಲೋಕಾಸಭಾಧ್ಯಕ್ಷ ಓಂ ಬಿರ್ಲಾ ಉದ್ಘಾಟಿಸಿದರು.

ಸಂವಿಧಾನಿಕ ಪ್ರಜಾಪ್ರಭುತ್ವ ಮತ್ತು ರಾಷ್ಟ್ರ ನಿರ್ಮಾಣವನ್ನು ಬಲಪಡಿಸುವಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಪಾತ್ರ" ಎಂಬುದು ಎರಡು ದಿನಗಳ ಸಮ್ಮೇಳನದ ವಿಷಯವಾಗಿದೆ.

ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಲೋಕಾಸಭಾ ಅಧ್ಯಕ್ಷ ಓಂ ಬಿರ್ಲಾ, ನಗರ ಸ್ಥಳೀಯ ಸಂಸ್ಥೆಗಳು ಪ್ರಜಾಪ್ರಭುತ್ವದ ಪ್ರಬಲ ಸಂಸ್ಥೆಗಳಲ್ಲಿ ಒಂದಾಗಿದೆ. ಈ ಸಂಸ್ಥೆಗಳನ್ನು ಬಲಪಡಿಸುವುದು, ಜನರ ಅಗ್ಯತತೆಗಳು ಮತ್ತು ಆಕಾಂಕ್ಷೆಗಳನ್ನು ಪೂರೈಸಲು ಸಹಾಯ ಮಾಡುತ್ತದೆ ಎಂದು ಹೇಳಿದರು.

ದೇಶದ ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಬಲಪಡಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಪ್ರಜಾಪ್ರಭುತ್ವನ್ನು ಮತ್ತಷ್ಟು ಬಲಪಡಿಸಲು ಸಂಸತ್ತಿನಿಂದ ಹಿಡಿದು ಸ್ಥಳೀಯ ಸಂಸ್ಥೆಗಳ ವರೆಗೆ ಕಲಾಪಗಳು ಸುಗಮವಾಗಿ ನಡೆಯಬೇಕಿದೆ ಎಂದು ಅವರು ಪ್ರತಿಪಾದಿಸಿದರು.

<><><>

ಕೋವಿಡ್ ಲಸಿಕೆಗಳು ಮತ್ತು ಹಠಾತ್ ಹೃದಯಾಘಾತದ ಸಾವುಗಳ ನಡುವೆ ಯಾವುದೇ ಸಂಬಂಧ ಕಂಡು ಬಂದಿಲ್ಲ ಎಂದು ದೆಹಲಿಯ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ - ಏಮ್ಸ್ ತಿಳಿಸಿದೆ.

ಈ ಕುರಿತು ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಏಮ್ಸ್‌ನ ಪ್ರೋಫೆಸರ್ ಡಾ. ಕರಣ್ ಮದನ್, ಕೋವಿಡ್ ಲಸಿಕೆಗಳು ಪರಿಣಾಮಾಕಾರಿಯಾಗಿದ್ದವು. ಮರಣ ಪ್ರಮಾಣವನ್ನು ತಗ್ಗಿಸುವಲ್ಲಿ ನಿರ್ಣಾಯಕ ಪಾತ್ರವಹಿಸಿದ್ದವು ಎಂದು ಹೇಳಿದರು.

ಕೋವಿಡ್ ಸಾಂಕ್ರಾಮಿಕ ಸಮಯದಲ್ಲಿ ಜನರ ಜೀವಗಳನ್ನು ಉಳಿಸಲು ಲಸಿಕೆಗಳು ಏಕೈಕ ಸಂಭಾವ್ಯ ಕ್ರಮವಾಗಿತ್ತು. ಹೆಚ್ಚಿನ ಪ್ರಮಾಣದಲ್ಲಿ ಸಾವುಗಳನ್ನು ತಗ್ಗಿಸಲು ಲಸಿಕೆಗಳು ಬಹಳಷ್ಟು ಪ್ರಯೋಜನಕಾರಿಯಾಗಿದ್ದವು ಎಂದರು.

ದೆಹಲಿ ಏಮ್ಸ್ ಹೃದ್ರೋಗ ವಿಭಾಗದ ಮುಖ್ಯಸ್ಥ ಡಾ. ರಾಜೀವ್ ನಾರಂಗ್ ಮಾತನಾಡಿ, ಐಸಿಎಂಆರ್ ಮತ್ತು ಏಮ್ಸ್ ನಡೆಸಿದ ಅಧ್ಯಯನವು ಕೋವಿಡ್ ಲಸಿಕೆಯನ್ನು ಪಡೆದವರಿಗೆ ಹಠಾತ್ ಹೃದಯಾಘಾತದಿಂದ ಸಾವಿನ ಅಪಾಯ ಕಡಿಮೆ ಎಂದು ಕಂಡುಹಿಡಿದಿದೆ ಎಂದು ತಿಳಿಸಿದರು.

<><><>

ಭಯೋತ್ಪಾದನೆ ಕುರಿತು ಭಾರತದ ನಿಲುವನ್ನು ಬೆಂಬಲಿಸದ ಪಾಶ್ಚಿಮಾತ್ಯ ರಾಷ್ಟ್ರಗಳನ್ನು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್.ಜೈಶಂಕರ್ ಪ್ರಶ್ನಿಸಿದ್ದಾರೆ. ಅಲ್ಲದೆ, ಏಕಿಕೃತ ಜಾಗತಿಕ ಪ್ರತಿಕ್ರಿಯೆಯ ಅಗತ್ಯವನ್ನು ಒತ್ತಿ ಹೇಳಿದ್ದಾರೆ.

ಅಮೆರಿಕಾದ ವಾಷಿಂಗ್‌ಟನ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಡಾ. ಎಸ್ ಜೈಶಂಕರ್, ಭಯೋತ್ಪದಾನೆ ವಿಷಯದಲ್ಲಿ ಭಾರತ ಹೆಚ್ಚು ಸ್ಥಿರ ಮತ್ತು ತತ್ವಬದ್ಧವಾಗಿದೆ ಎಂದರು.

ಭಾರತದಲ್ಲಿ ಭಯೋತ್ಪದಾನ ದಾಳಿಗಳು ನಡೆದಾಗ ಹಾಗೂ ದೇಶದ ಹೋರಗೆ ಉಗ್ರ ದಾಳಿಗಳು ನಡೆದಾಗ ಭಾರತ ಒಂದೇ ರೀತಿಯ ನಿಲುವನ್ನು ತಾಳಿದೆ ಎಂದು ಅವರು ಹೇಳಿದರು.

ಭಾರತ ಮತ್ತು ಪಾಕಿಸ್ತಾನ ನಡುವಿನ ಕದನ ವಿರಾಮದ ಕುರಿತು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆಗಳ ಕುರಿತು ಪ್ರತಿಕ್ರಿಯಿಸಿದ ಸಚಿವ ಡಾ. ಎಸ್ ಜೈಶಂಕರ್, ಆ ಸಮಯದಲ್ಲಿ ಏನಾಯಿತು ಎಂಬುದರ ದಾಖಲೆ ಬಹಳ ಸ್ಪಷ್ಟವಾಗಿದೆ. ಕದನ ವಿರಾಮವು ಭಾರತ ಮತ್ತು ಪಾಕಿಸ್ತಾನದ ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕರ ನಡುವೆ ಮಾತುಕತೆ ನಡೆಸಲಾದ ವಿಷಯವಾಗಿದೆ ಎಂದು ತಿಳಿಸಿದ್ದಾರೆ.

<><><>

ಭಾರತೀಯ ಅಂಚೆ ಇಲಾಖೆ ಪ್ರಮುಖ ತಾಂತ್ರಿಕ ಪರಿವರ್ತನೆಗೆ ಒಳಗಾಗುತ್ತಿದೆ ಎಂದು ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದ್ದಾರೆ.

ಆಕಾಶವಾಣಿ ನ್ಯೂಸ್‌ಗೆ ವಿಶೇಷ ಸಂದರ್ಶನದಲ್ಲಿ ಅವರು, ಮೊದಲ ಬಾರಿಗೆ ಅಂಚೆ ಇಲಾಖೆಯಲ್ಲಿ ಮುಖ್ಯ ತಂತ್ರಜ್ಞಾನ ಅಧಿಕಾರಿ ನೇಮಕಗೊಂಡಿದ್ದಾರೆ. ಅಂಚೆ ಇಲಾಖೆಯಲ್ಲಿ ನಾವೀನ್ಯತೆ ಮತ್ತು ತಾಂತ್ರಿಕ ಪ್ರಗತಿಗೆ ಚಾಲನೆ ನೀಡುವ ಬಗ್ಗೆ ಅವರು ಕೆಲಸ ಮಾಡುತ್ತಾರೆ ಎಂದು ತಿಳಿಸಿದರು.

ಈ ವಿಶೇಷ ಸಂದರ್ಶನವು ಇಂದು ರಾತ್ರಿ ೯.೩೦ಕ್ಕೆ ೧೦೦.೧ ಆಕಾಶವಾಣಿ ಎಫ್‌ಎಂ ಗೋಲ್ಡ್ ಚಾನಲ್ ಮತ್ತು ಆಕಾಶವಾಣಿ ಇತರೆ ವಾಹಿನಿಗಳಲ್ಲಿ ಹಾಗೂ ಯೂಟ್ಯೂಬ್ ಚಾನಲ್  ನ್ಯೂಸ್ ಅನ್ ಏರ್ ಅಫಿಷಿಯಲ್" ನಲ್ಲಿ ಏಕಕಾಲದಲ್ಲಿ ಪ್ರಸಾರವಾಗಲಿದೆ.

<><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ನಡೆದ ರಕ್ಷಣಾ ಸ್ವಾಧೀನ ಮಂಡಳಿಯ ಸಭೆಯಲ್ಲಿ, ಒಂದು ಲಕ್ಷ ಕೋಟಿಗೂ ಹೆಚ್ಚಿನ ಮೊತ್ತದ ಹತ್ತು ಬಂಡವಾಳ ಸ್ವಾಧೀನ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಲಾಗಿದೆ.

ಶಸ್ತ್ರಸಜ್ಜಿತ ವಾಹನಗಳು, ಎಲೆಕ್ಟ್ರಾನಿಕ್ ಯುದ್ಧ ವ್ಯವಸ್ಥೆ, ಭಾರತೀಯ ವಾಯು ಪಡೆ, ಭೂಸೇನೆ ಮತ್ತು ನೌಕ ಪಡೆಗಾಗಿ ಸಂಯೋಜಿತ ಸಾಮಾನ್ಯ ದಾಸ್ತಾನು ನಿರ್ವಹಣಾ ವ್ಯವಸ್ಥೆ ಮತ್ತು ಮೇಲ್ಮೈಯಿಂದ ಗಾಳಿಗೆ ಹಾರುವ ಕ್ಷಿಪಣಿಗಳ ಖರೀದಿಗೆ ಅನುಮೋದನೆ ನೀಡಲಾಯಿತು.

ರಕ್ಷಣಾ ಸಚಿವಾಲಯದ ಪ್ರಕಾರ, ಈ ಖರೀದಿಗಳು ಹೆಚ್ಚಿನ ಚಲನಶೀಲತೆ, ಪರಿಣಾಮಕಾರಿ ವಾಯು ರಕ್ಷಣೆ, ಉತ್ತಮ ಪೂರೈಕೆ ಸರಪಳಿ ನಿರ್ವಹಣೆಯನ್ನು ಒದಗಿಸುತ್ತದೆ ಮತ್ತು ಸಶಸ್ತ್ರ ಪಡೆಗಳ ಕಾರ್ಯಾಚರಣೆಯ ಸನ್ನದ್ಧತೆಯನ್ನು ಹೆಚ್ಚಿಸಲಿದೆ.

<><><>

ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಗಗನಯಾತ್ರಿಯಾಗಿರುವ ಭಾರತೀಯ ವಾಯುಪಡೆಯ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ, ಕಕ್ಷೆಯ ಪ್ರಯೋಗಾಲಯದಲ್ಲಿ ಮೆದುಳು-ಕಂಪ್ಯೂಟರ್ ಇಂಟರ್ಫೇಸ್‌ನ್ನು ಅಭಿವೃದ್ಧಿಪಡಿಸಲು ಕೆಲಸ ಮಾಡುತ್ತಿದ್ದಾರೆ.

ಆಕ್ಸಿಯಮ್ ಸ್ಪೇಸ್ ಮಿಷನ್ -೪ ರ ಭಾಗವಾಗಿರುವ ಶುಕ್ಲಾ, ಪೋಲೆಂಡ್‌ನ ಸಹ ಗಗನಯಾತ್ರಿ ಸ್ಲಾವೋಸ್ಜ್ ಉಜ್ನಾನ್ಸ್ಕಿ-ವಿಸ್ನಿವ್ಸ್ಕಿ ಅವರೊಂದಿಗೆ ಕೊಲಂಬಸ್ ಪ್ರಯೋಗಾಲಯದಲ್ಲಿ ಕಾರ್ಯಪ್ರವೃತ್ತರಾಗಿದ್ದಾರೆ. ಮೆದುಳು-ಕಂಪ್ಯೂಟರ್ ಇಂಟರ್ಫೇಸ್‌ಗಳನ್ನು ನಿರ್ಮಿಸಲು ಮೆದುಳಿನ ಚಟುವಟಿಕೆಯನ್ನು ದಾಖಲಿಸಲು ನಿಯರ್-ಇನ್ಫ್ರಾರೆಡ್ ತಂತ್ರಜ್ಞಾನವನ್ನು ಬಳಸಿಕೊಂಡು ಅಧ್ಯಯನ ಮಾಡುತ್ತಿದ್ದಾರೆ ಎಂದು ಅಮೆರಿಕ ಬಾಹ್ಯಾಕಾಶ ಸಂಸ್ಥೆ ನಾಸಾ ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿದೆ.

'ಥಾಟ್ಸ್ ಓವರ್ ಗ್ರಾವಿಟಿ" ಎಂಬ ಪ್ರಯೋಗವು ಗಗನಯಾತ್ರಿಗಳು ಬಾಹ್ಯಾಕಾಶದಲ್ಲಿ ಕಂಪ್ಯೂಟರ್‌ಗಳನ್ನು ನಿಯಂತ್ರಿಸಲು ಅಥವಾ ಸಂವಹನ ನಡೆಸಲು ತಮ್ಮ ಮೆದುಳನ್ನು ಹೇಗೆ ಬಳಸಬಹುದು ಎಂಬುದನ್ನು ಅನ್ವೇಷಿಸಿದೆ.

<><><><>

ಕೇಂದ್ರ ಸಚಿವ ನಿತಿನ್ ಗಡ್ಕರಿ ಇಂದು ಜಾರ್ಖಂಡ್‌ನ ಗರ್ವಾದಲ್ಲಿ ೨ ಸಾವಿರ ೪೫೬ ಕೋಟಿ ರೂಪಾಯಿ ಮೌಲ್ಯದ ಎರಡು ರಾಷ್ಟ್ರೀಯ ಹೆದ್ದಾರಿ ಯೋಜನೆಗಳನ್ನು ಉದ್ಘಾಟಿಸಿದರು.

ಜಾರ್ಖಂಡ್‌ಗೆ ಭೇಟಿ ನೀಡಿರುವ ಅವರು, ೨ ಲಕ್ಷ ಕೋಟಿ ರೂಪಾಯಿ ಮೌಲ್ಯದ ಹೆದ್ದಾರಿ ಯೋಜನೆಗಳನ್ನು ಜಾರಿಗೆ ತರಲಾಗುವುದು ಎಂದು ಘೋಷಿಸಿದರು.

ರಾಂಚಿಯಲ್ಲಿ ೫೬೦ ಕೋಟಿ ರೂಪಾಯಿಗಳ ಎಲಿವೇಟೆಡ್ ಕಾರಿಡಾರ್ ಸೇರಿದಂತೆ ೬ ಸಾವಿರ ೩೫೦ ಕೋಟಿ ರೂಪಾಯಿ ಮೌಲ್ಯದ ಹನ್ನೊಂದು ಯೋಜನೆಗಳನ್ನು ಉದ್ಘಾಟಿಸಿದರು.

ಗರ್ವಾದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ೪೦ ಸಾವಿರ  ಕೋಟಿ ರೂಪಾಯಿ ಮೌಲ್ಯದ ರಾಷ್ಟ್ರೀಯ ಹೆದ್ದಾರಿ ಯೋಜನೆಗಳು ಪೂರ್ಣಗೊಂಡಿವೆ. ೭೦ ಸಾವಿರ  ಕೋಟಿ ರೂಪಾಯಿ ಮೌಲ್ಯದ ಹೆದ್ದಾರಿ ಯೋಜನೆಗಳು ಅನುಷ್ಠಾನಗೊಳ್ಳುತ್ತಿವೆ. ಆದರೆ ೭೫ ಸಾವಿರ ಕೋಟಿ ರೂಪಾಯಿ ಮೌಲ್ಯದ ಯೋಜನೆಗಳು ಪ್ರಗತಿಯಲ್ಲಿವೆ ಎಂದು ಹೇಳಿದರು.

೩೮ ಸಾವಿರ ಕೋಟಿ ರೂಪಾಯಿಗಳ ವಾರಣಾಸಿ-ರಾಂಚಿ-ಕೋಲ್ಕತ್ತಾ ಮಾರ್ಗದಂತಹ ಪ್ರಮುಖ ಕಾರಿಡಾರ್‌ಗಳ  ಬಗ್ಗೆ ಪ್ರಸ್ತಾಪಿಸಿದರು. ಈ ಸಂದರ್ಭದಲ್ಲಿ ಅವರು ಪ್ರಾದೇಶಿಕ ಸಂಪರ್ಕ ಮತ್ತು ಆರ್ಥಿಕ ಬೆಳವಣಿಗೆಯನ್ನು ಹೆಚ್ಚಿಸುವ ಕೇಂದ್ರದ ಬದ್ಧತೆಯನ್ನು ಅವರು ಪುನರುಚ್ಚರಿಸಿದರು.

<><><><>

ಜುಲೈ ೨೧ ರಿಂದ ಆಗಸ್ಟ್ ೨೧ ರವರೆಗೆ ಸಂಸತ್ತಿನ ಮಳೆಗಾಲದ ಅಧಿವೇಶನ ನಡೆಯಲಿದೆ.

ಅಧಿವೇಶನ ಕರೆಯುವ ಸರ್ಕಾರದ ಪ್ರಸ್ತಾವನೆಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅನುಮೋದಿಸಿದ್ದಾರೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ.

ಸ್ವಾತಂತ್ರ್ಯ ದಿನಾಚರಣೆಯ ಹಿನ್ನೆಲೆಯಲ್ಲಿ ಆಗಸ್ಟ್ ೧೩ ಮತ್ತು ೧೪ ರಂದು ಯಾವುದೇ ಅಧಿವೇಶನ ಇರುವುದಿಲ್ಲ ಎಂದು ಅವರು ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಮಾಹಿತಿ ನೀಡಿದ್ದಾರೆ.

<><><>

ಇಂಗ್ಲೆಂಡ್‌ನ ಬರ್ಮಿಂಗ್‌ಹ್ಯಾಮ್‌ನ ಎಜ್‌ಬಾಸ್ಟನ್‌ನಲ್ಲಿ ನಡೆಯುತ್ತಿರುವ ಭಾರತ-ಇಂಗ್ಲೆಂಡ್ ನಡುವಿನ ಎರಡನೇ ಟೆಸ್ಟ್‌ನ ಎರಡನೇ ದಿನದಾಟದಲ್ಲಿ ಭಾರತ ಇತ್ತೀಚಿನ ವರದಿ ಬಂದಾಗ ೭ ವಿಕೆಟ್ ನಷ್ಟಕ್ಕೆ ೪೯೭ ರನ್ ಮಾಡಿ ಆಡುತ್ತಿದೆ.

<><><>